**ಕರ್ನಾಟಕ ಸರ್ಕಾರ**

ಸಂ:ಎಎಲ್‌ಎನ್:(ಇ.ಬಿ.ಬಿ.):ಎಸ್.ಆರ್/08/13-14

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 03-06-2013.

**ಅಧಿಕೃತ ಜ್ಞಾಪನ**

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಮಾರಗೊಂಡನಹಳ್ಳಿ ಗ್ರಾಮದ ಸರ್ವೆ ನಂ. 46/2 ರಲ್ಲಿ 1-11 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಜಿ.ರಾಧಾಕೃಷ್ಣನ್ ಬಿನ್ ಲೇಟ್ ಗಣೇಶಾಚಾರಿ, ನಂ.36, ಎ.ಟಿ.ಬ್ಲಾಕ್, ಮಾರಪ್ಪ ಗಾರ್ಡನ್, ಬೆನ್‌ಸನ್ ಟೌನ್ ಅಂಚೆ, ಬೆಂಗಳೂರು-46 ರವರು ಸಲ್ಲಿಸಿರುವ ಅರ್ಜಿ ದಿ: 28-2-2013.

ಉಲ್ಲೇಖ:-
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ.56:ಎಲ್‌ಜಿಪಿ/2008 ದಿನಾಂಕ:10-9-08 ಮತ್ತು 24-9-2008.
3. ತಹಶೀಲ್ದಾರ್,ಬೆಂಗಳೂರು ಪೂರ್ವ ತಾಲ್ಲೂಕು, ರವರ ವರದಿ ಸಂಖ್ಯೆ ಎಎಲ್‌ಎನ್(ಬಿ)ಎಸ್‌ಆರ್/277/12-13, ದಿನಾಂಕ: 30-8-2013.
4. ಭೂ ಪರಿವರ್ತನಾ ಶುಲ್ಕ ರೂ.69,424-00 ಹಾಗೂ ಪೋಡಿ ಶುಲ್ಕ ರೂ. 55-00 ಒಟ್ಟು ರೂ.69,479-00 ಗಳನ್ನು ಚಲನ್ ನಂ. 74 ರಂತೆ ದಿನಾಂಕ: 30-5-2013 ಎಸ್.ಬಿ.ಎಂ. ಶಾಖೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಸಹಾಯಕ ನಿರ್ದೇಶಕರು (ಉತ್ತರ), ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/ಸಿ.ಎಲ್-41/366/13-14, ದಿನಾಂಕ:24-4-2013 ಮತ್ತು ವಿಶೇಷ ಅಪರ ಭೂಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂ:ಬೆಂಅಪ್ರಾ/ವಿಅಭೂಸ್ವಾಅ/ಸಿ1/ಪಿಆರ್/21/13-14, ದಿನಾಂಕ: 24-4-2013.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450-00 (ರೂಪಾಯಿಗಳು ಐವತ್ತ ನಾಲ್ಕು ಸಾವಿರದ ನಾನ್ನೂರ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ, ಅರ್ಜಿದಾರರಾದ ಶ್ರೀ ಜಿ.ರಾಧಾಕೃಷ್ಣನ್ ಬಿನ್ ಲೇಟ್ ಗಣೇಶಾಚಾರಿ, ನಂ.36, ಎ.ಟಿ.ಬ್ಲಾಕ್, ಮಾರಪ್ಪ ಗಾರ್ಡನ್, ಬೆನ್‌ಸನ್ ಟೌನ್ ಅಂಚೆ, ಬೆಂಗಳೂರು-46 ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಮಾರಗೊಂಡನಹಳ್ಳಿ ಗ್ರಾಮದ ಸರ್ವೆ ನಂ. 46/2 ರಲ್ಲಿ 1-11 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಭೂ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ / ಕಟ್ಟಡ ನಕ್ಷೆಗೆ ಅನುಮೋದನ ಪಡೆಯದೆ ಪರಭಾರೆ ಮಾಡಕೂಡದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ಕುಡಿಯುವ ನೀರು ರಸ್ತೆ, ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಈ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ಹಾಕು ಖರಾಬ್ ಪೋಟ್ ಖರಾಬ್ ಜಮೀನು ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ವಾಸದ ಘಟಕಗಳು ಹೊರಸೂಸುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ವಾಸದ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್ನಿಂತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ [illegible]ಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ [illegible] ಹೊಣೆಗಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

7. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

<u>ಷೆಡ್ಯೂಲ್ ವಿವರ</u>

ಬೆಂಗಳೂರು ಜಿಲ್ಲೆ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಮಾರಗೊಂಡನಹಳ್ಳಿ ಗ್ರಾಮದ ಸರ್ವೆ ನಂ. 46/2 ರಲ್ಲಿ 1-11 ಎಕರೆ/ಗುಂಟೆ ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

<u>-: ಚೆಕ್ಕುಬಂದಿ :-</u>

| | |
|---|---|
| ಪೂರ್ವಕ್ಕೆ | ರಸ್ತೆ ಸರ್ವೆ ನಂ. 46/2 ರ ಜಮೀನು |
| ಪಶ್ಚಿಮಕ್ಕೆ | ಕಲ್ಲೆರೆ ಗಡಿ |
| ಉತ್ತರಕ್ಕೆ | ಸರ್ವೆ ನಂ. 50 ರ ಜಮೀನು |
| ದಕ್ಷಿಣಕ್ಕೆ | ಸರ್ವೆ ನಂ. 45 ರ ಜಮೀನು |

ಸಹಿ/-
(ಡಾ॥ ಜೆ.ಸಿ. ಪ್ರಕಾಶ್),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ/ ಮಾಹಿತಿಗಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u>

1. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು, ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಕಂದಾಯ ಭವನ, ಬೆಂಗಳೂರು. ರವರಿಗೆ
4. ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ, ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪತಹಶೀಲ್ದಾರರು/ನಾಡಕಚೇರಿ, ಬಿದರಹಳ್ಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ
6. ಖಾತೇದಾರರಾದ ಶ್ರೀ ಪಿ.ರಾಧಾಕೃಷ್ಣನ್ ಬಿನ್ ಲೇಟ್ ಗೋಪಾಲಾಚಾರಿ, ನಂ.36, ಎ.ಟಿ.ಬ್ಲಾಕ್, ಮಾರಪ್ಪ ಗಾರ್ಡನ್, ಬೆನ್‌ಸನ್ ಟೌನ್ ಅಂಚೆ, ಬೆಂಗಳೂರು-46 ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7. ಕಚೇರಿ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.